# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2322
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 21.03.2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಶಾಲೆಗಳಲ್ಲಿ ಶಿಥಿಲಗೊಂಡ ಕೊಠಡಿಗಳನ್ನು ನೆಲಸಮಗೊಳಿಸಲು ಅನುಮತಿ ನೀಡುವ ಪ್ರಾಧಿಕಾರ ಯಾವುದು; | ಸರ್ಕಾರಿ ಶಾಲೆಗಳಲ್ಲಿ ಶಿಥಿಲಗೊಂಡ ಕೊಠಡಿಗಳನ್ನು ನೆಲಸಮಗೊಳಿಸಲು ಕಾರ್ಯಪಾಲಕ ಅಭಿಯಂತರರು ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರು ಅನುಮತಿ ನೀಡುವ ಪ್ರಾಧಿಕಾರಿಗಳಾಗಿರುತ್ತಾರೆ. ವಿವರ ಕೆಳಕಂಡಂತಿದೆ<br>1] ಸಂಬಂಧಿಸಿದ ತಾಲ್ಲೂಕುಗಳ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗರವರಿಂದ ಶಾಲಾ ಕಟ್ಟಡ ಶಿಥಿಲಾವಸ್ಥೆ ಮತ್ತು ನೆಲಸಮಗೊಳಿಸುವ ಬಗ್ಗೆ ದೃಢೀಕರಣ ಪತ್ರ ಪಡೆಯಬೇಕು.<br>2] ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ–ವಿಭಾಗ ರವರು ದೃಢೀಕರಿಸಿರುವುದರಿಂದ ಸಂಬಂಧಿಸಿದ ಜಿಲ್ಲೆಯ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರು ನೆಲಸಮಗೊಳಿಸಲು ಅನುಮತಿ ನೀಡುತ್ತಾರೆ. |
| ಆ) | ಈ ರೀತಿ ಅನುಮತಿ ನೀಡುವಲ್ಲಿ ಅನುಸರಿಸಬೇಕಾದ ಷರತ್ತುಗಳೇನು; (ಈ ಸಂಬಂಧ ಸರ್ಕಾರದ ಆದೇಶ/ ಸುತ್ತೋಲೆಯನ್ನು ಒಳಗೊಂಡಂತೆ ಮಾಹಿತಿ ಒದಗಿಸುವುದು) | ಸರ್ಕಾರಿ ಶಾಲೆಗಳಲ್ಲಿ ಶಿಥಿಲಗೊಂಡ ಕೊಠಡಿಗಳನ್ನು ನೆಲಸಮಗೊಳಿಸಲು ಅನುಮತಿ ನೀಡುವಲ್ಲಿ ಅನುಸರಿಸಬೇಕಾದ ಕೆಲವು ಸಾಮಾನ್ಯ ಷರತ್ತುಗಳು ಕೆಳಕಂಡಂತಿವೆ:<br>1] ಸದರಿ ಶಿಥಿಲಗೊಂಡಿರುವ ಕೊಠಡಿಗಳು ದುರಸ್ತಿ ಮಾಡಲು ಸಾಧ್ಯವಿಲ್ಲದಂತಹ ಕೊಠಡಿಗಳಾಗಿರಬೇಕು.<br>2] ಕಾರ್ಯನಿರ್ವಾಹಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ/ ಲೋಕೋಪಯೋಗಿ ವಿಭಾಗ ರವರಿಂದ ಸದರಿ ಕೊಠಡಿಗಳು ಶಿಥಿಲಗೊಂಡು ಬಳಕೆಗೆ ಯೋಗ್ಯವಿಲ್ಲದಿರುವ ಬಗ್ಗೆ ತಾಂತ್ರಿಕವಾಗಿ ಪರಿಶೀಲಿಸಿ ವರದಿ ಪಡೆಯುವುದು.<br>3] ಶಿಥಿಲಗೊಂಡ ಕೊಠಡಿಗಳ ಛಾಯಾ |

| | | |
|---|---|---|
| | | ಚಿತ್ರದೊಂದಿಗೆ ನೆಲಸಮಗೊಳಿಸಲು ಅನುಮತಿಗಾಗಿ ಕೋರುವುದು. |
| ಇ) | 2018ನೇ ಸಾಲಿನಲ್ಲಿ 3 ವರ್ಷದ ವಿಶೇಷ ಪ್ಯಾಕೇಜ್ ಯೋಜನೆಯಡಿ ಅನುಮೋದನೆಯಾದ ಸರ್ಕಾರಿ ಶಾಲೆಗಳ ಕೊಠಡಿ ನಿರ್ಮಾಣ ಕಾಮಗಾರಿಗಳಿಗೆ 3ನೇ ವರ್ಷದ ಅನುದಾನ ಬಿಡುಗಡೆ ಮಾಡದೆ ಕಾಮಗಾರಿಗಳನ್ನು ಸ್ಥಗಿತಗೊಳಿಸಲು ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರಿ ಆದೇಶ ಸಂಖ್ಯೆ: ಇಪಿ 118 ಯೋಸಕ 2021ರ ದಿನಾಂಕ:03.03.2022ರ ಮೂಲಕ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಅಧಿಕೃತ ಜ್ಞಾಪನ ಸಂಖ್ಯೆ:ಯೋ:11/ಸ.ಪ್ರಾ.ಶಾ.ಕೊ.ನಿ(ವಿ.ಪ್ಯಾ) 6/ 2020-21. ದಿನಾಂಕ: 09-03-2022ರಂತೆ ಮೂರನೇ ವರ್ಷದ ಅಂತಿಮ ಕಂತಿನ ಅನುದಾನ ಸರ್ಕಾರಿ ಪ್ರಾಥಮಿಕ ಶಾಲೆಗಳ ಕೊಠಡಿಗಳ ಮರು ನಿರ್ಮಾಣಕ್ಕಾಗಿ ರೂ.4249.12ಲಕ್ಷಗಳು ಮತ್ತು ಸರ್ಕಾರಿ ಪ್ರೌಢಶಾಲೆಗಳ ಕೊಠಡಿಗಳ ಮರು ನಿರ್ಮಾಣಕ್ಕಾಗಿ ರೂ.3485.71 ಲಕ್ಷಗಳಂತೆ ಒಟ್ಟು ರೂ.7734.83 ಲಕ್ಷಗಳನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು(ಆಡಳಿತ) ರವರಿಗೆ ಬಿಡುಗಡೆಗೊಳಿಸಲಾಗಿದೆ.<br>ಮಂಜೂರಾಗಿರುವ 2405 ಕೊಠಡಿಗಳ ಪೈಕಿ 101 ಕೊಠಡಿಗಳ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮಕ್ಕಳ ಸಂಖ್ಯೆ ಕಡಿಮೆ ಇರುವುದರಿಂದ ಹಾಗೂ ನಿವೇಶನ ಲಭ್ಯತೆ ಇಲ್ಲವೆಂದು ತಿಳಿಸಿರುವ ವರದಿಯನುಸಾರ ಕಾಮಗಾರಿ ಸ್ಥಗಿತಗೊಳಿಸಿದೆ. ಉಳಿದ 2304 ಕೊಠಡಿ ನಿರ್ಮಾಣ ಕಾಮಗಾರಿಗಳ ಪ್ರಗತಿ ಅಂತಿಮ ಹಂತದಲ್ಲಿವೆ. |
| ಈ) | ಹಾಗಿದ್ದಲ್ಲಿ, ಈ ರೀತಿ ಸ್ಥಗಿತಗೊಳಿಸಲು ಕಾರಣಗಳೇನು; | ನಿವೇಶನ ಸಮಸ್ಯೆಯಿಂದ ಹಾಗೂ 2018-19ರಲ್ಲಿನ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಕೊಠಡಿ ನಿರ್ಮಾಣಕ್ಕೆ ಮಂಜೂರಾತಿ ದೊರೆತಿದ್ದು, 2021-22ರಲ್ಲಿ ಮಕ್ಕಳ ಸಂಖ್ಯೆ ಕಡಿಮೆ ಇರುವುದರಿಂದ ಕೊಠಡಿ ಅವಶ್ಯಕತೆ ಇರುವುದಿಲ್ಲ. ಆದ್ದರಿಂದ 101 ಕಾಮಗಾರಿಗಳನ್ನು ಕೈಬಿಡಲಾಗಿದೆ. |
| ಉ) | ಯಾವ ಕಾಲಮಿತಿಯಲ್ಲಿ ಸ್ಥಗಿತಗೊಂಡ ಕಾಮಗಾರಿಗಳಿಗೆ ಅನುದಾನ ಬಿಡುಗಡೆಗೊಳಿಸಿ, ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು? | |

**ಇಪಿ: 126 ಯೋಸಕ 2022**

(ಬಿ.ಸಿ.ನಾಗೇಶ್)

**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**